NOVEMBER 19, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯ ಸರ್ಕಾರದ ಸ್ಪಷ್ಟ ನೀತಿಗಳು,** ಸುಗಮ ಅನುಮೋದನೆಗಳು, ಕೌಶಲ್ಯ, ಮೂಲ ಸೌಕರ್ಯದಂತಹ ಪೂರಕ ವಾತಾವರಣ, ಕರ್ನಾಟಕವನ್ನು, ದೇಶದ ಅತ್ಯಂತ ವಿಶ್ವಾಸಾರ್ಹ, ಹೂಡಿಕೆಯ ತಾಣವಾಗಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಬೆಂಗಳೂರಿನಲ್ಲಿ ಆಯೋಜಿತ ತಂತ್ರಜ್ಞಾನ ಶೃಂಗ ಸಭೆ ಉದ್ಘಾಟನೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಬಿಯಾಂಡ್ ಬೆಂಗಳೂರು ಮಿಶನ್, ರಾಜ್ಯದ ದ್ವಿತೀಯ ದರ್ಜೆ ನಗರಗಳಲ್ಲಿ ನಾವಿನ್ಯತೆ ವಲಯಗಳನ್ನು ಸ್ಥಾಪಿಸಿದೆ. ಆ ಮೂಲಕ, ಡಿಜಿಟಲ್ ಯುಗದ ಪ್ರಯೋಜನಗಳು ಎಲ್ಲ ನಾಗರಿಕರಿಗೆ ತಲುಪುವಂತಾಗಿದೆ ಎಂದರು.

<><><>

**ಇಂದು ಸ್ವಾತಂತ್ರ್ಯ ಹೋರಾಟಗಾರರಾದ** ಝಾನ್ಸಿ ರಾಣಿ ಲಕ್ಷ್ಮೀಬಾಯಿ ಅವರ ಜನ್ಮ ದಿನ. ಝಾನ್ಸಿ ರಾಣಿ ಲಕ್ಷ್ಮೀ ಬಾಯಿ ಅವರ ಅಪ್ರತಿಮ ತ್ಯಾಗ, ಬಲಿದಾನವನ್ನು ಸ್ಮರಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಗಣ್ಯರು, ಗೌರವ ನಮನಗಳನ್ನು ಸಲ್ಲಿಸಿದ್ದಾರೆ. ದೇಶದ ಇತಿಹಾಸದಲ್ಲಿ ಝಾನ್ಸಿ ರಾಣಿ ಲಕ್ಷ್ಮೀ ಬಾಯಿ ಅವರ ಹೆಸರು ಅಜರಾಮರವಾಗಿದೆ. ಅವರು ಮಹಿಳಾ ಶಕ್ತಿ ಹಾಗೂ ಸ್ಥೈರ್ಯದ ಸಂಕೇತವಾಗಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ತಮ್ಮ ಎಕ್ಸ್ ಖಾತೆ ಮೂಲಕ ಗೌರವ ಸಮರ್ಪಿಸಿದ್ದಾರೆ.

<><><>

**ಮಾಜಿ ಪ್ರಧಾನಮಂತ್ರಿ ಇಂದಿರಾ ಗಾಂಧಿ** ಜನ್ಮ ದಿನವಾದ ಇಂದು, ನಾಡಿಗೆ ಅವರು ನೀಡಿದ ಕೊಡುಗೆಗಳನ್ನು ಸ್ಮರಿಸಿರುವ ಉಪ ಮುಖ್ಯಮಂತ್ರಿ ಹಾಗೂ ಕೆ.ಪಿ.ಸಿ.ಸಿ ಅಧ್ಯಕ್ಷರಾದ ಡಿ.ಕೆ ಶಿವಕುಮಾರ ಗೌರವ ನಮನಗಳನ್ನು ಸಲ್ಲಿಸಿದ್ದಾರೆ.

<><><>

**ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ** ಪಟೇಲ ಅವರ 150ನೇ ಜನ್ಮ ದಿನಾಚರಣೆ ಹಿನ್ನೆಲೆ, ಬೆಳಗಾವಿಯಲ್ಲಿ ಏಕತಾ ಪಾದಯಾತ್ರೆ ಆಯೋಜಿಸಲಾಯಿತು. ಕಪಿಲೇಶ್ವರ ಮಂದಿರ, ಶನಿದೇವರ ಮಂದಿರ, ತಿಲಕ ಚೌಕ ಮೂಲಕ ಸಾಗಿದ ಏಕತಾ ಪಾದಯಾತ್ರೆ, ಧರ್ಮವೀರ ಸಂಭಾಜಿ ಮಹಾರಾಜ ಚೌಕದಲ್ಲಿ ಕೊನೆಗೊಂಡಿತು. ಛತ್ರಪತಿ ಶಿವಾಜಿ ಮಹಾರಾಜ ಉದ್ಯಾನದಿಂದ ಆರಂಭಗೊಂಡ ಏಕತಾ ಪಾದಯಾತ್ರೆಗೆ ಸಂಸದರಾದ ಜಗದೀಶ ಶೆಟ್ಟರ, ಚಾಲನೆ ನೀಡಿ, ಮಾತನಾಡಿದರು.

<><><>

**ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಜಿಲ್ಲೆಗಳ** ಪಟ್ಟಿಯಲ್ಲಿ ಒಟ್ಟು 112 ಜಿಲ್ಲೆಗಳನ್ನು ಗುರುತಿಸಲಾಗಿದೆ. ಮಿಷನ್ ವಾತ್ಸಲ್ಯ ಯೋಜನೆಯಡಿ, ಬಾಲಕಿಯರ ಬಾಲಮಂದಿರಗಳಲ್ಲಿ ಸೇರ್ಪಡೆಗೊಂಡಿರುವ ಮಕ್ಕಳಿಗೆ ಸೂಕ್ತ ಆರೈಕೆಯೊಂದಿಗೆ, ವಾತ್ಸಲ್ಯವು ಸಿಗಬೇಕು ಎಂದು ಕೇಂದ್ರ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ, ಜಂಟಿ ಕಾರ್ಯದರ್ಶಿ ಪ್ರೀತಂ ಬಿ.ಯಶವಂತ ಹೇಳಿದರು. ಯಾದಗಿರಿ ಜಿಲ್ಲೆಯಲ್ಲಿ ಅನುಷ್ಠಾನಗೊಂಡಿರುವ ಸಕ್ಷಮ ಅಂಗನವಾಡಿ, ಪೋಷಣ್ 2.0, ಮಿಶನ್ ಶಕ್ತಿ ಹಾಗೂ ಮಿಶನ್ ವಾತ್ಸಲ್ಯ ಯೋಜನೆಗಳ ಬಗ್ಗೆ ಪರಿಶೀಲನೆ ನಡೆಸಿದ ಬಳಿಕ ಅವರು ಮಾತನಾಡಿದರು. ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ, ಮೌಲ್ಯಮಾಪನ ಅಗತ್ಯವಾಗಿದೆ ಎಂದರು.

<><><>

**ರಾಜ್ಯ ಸರ್ಕಾರವು ಬೆಂಬಲ ಬೆಲೆಯೊಂದಿಗೆ,** ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ಆರಂಭಿಸಬೇಕು ಎಂದು ಆಗ್ರಹಿಸಿ, ಕರ್ನಾಟಕ ರೈತ ಸೇನೆ ವತಿಯಿಂದ ಧಾರವಾಡ ಜಿಲ್ಲೆ, ನವಲಗುಂದ ತೆಹಶೀಲ್ದಾರ ಕಚೇರಿ ಶಿರಸ್ತೇದಾರ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ರೈತ ಸಂಘದ ಅಧ್ಯಕ್ಷ ಶಂಕರಪ್ಪ ಅಂಬಲಿ ಹೇಳಿದರು. ತಾಲೂಕಿನಲ್ಲಿ ಸತತ ಮಳೆ ಹಿನ್ನೆಲೆ, ಬೆಳೆ ಹಾನಿ ಸಂಭವಿಸಿ ರೈತರು ಸಂಕಷ್ಟಕ್ಕೆ ಒಳಗಾಗಿದ್ದಾರೆ. ರಾಜ್ಯ ಸರ್ಕಾರವು, 3 ಸಾವಿರ ರೂಪಾಯಿ ಬೆಲೆಯೊಂದಿಗೆ ಗೋವಿನ ಜೋಳ ಖರೀದಿ ಪ್ರಕ್ರಿಯೆ ಆರಂಭಿಸಬೇಕು ಎಂದರು.

<><><>

**ಬಳ್ಳಾರಿ ನಗರದ ಡಿ.ಎ.ಆರ್** ಮೈದಾನದಲ್ಲಿ ಆಯೋಜಿತ, ಮೂರು ದಿನಗಳ ಪೊಲೀಸ್ ವಾರ್ಷಿಕ ಕ್ರೀಡಾಕೂಟ –2025 ಕ್ಕೆ, ಅರಣ್ಯ ಇಲಾಖೆ ಉಪ ಸಂರಕ್ಷಣಾಧಿಕಾರಿ ಡಾಕ್ಟರ ಬಸವರಾಜ ಕೆ.ಎನ್ ಚಾಲನೆ ನೀಡಿದರು. ಕ್ರೀಡಾಕೂಟದಲ್ಲಿ ಒಟ್ಟು 6 ತಂಡಗಳಲ್ಲಿ, 200 ಜನ ಕ್ರೀಡಾಪಟುಗಳು ಪಾಲ್ಗೊಂಡಿದ್ದಾರೆ.

<><><>

**ಅಪರಾಧಗಳನ್ನು ತಡೆಗಟ್ಟಲು** ಪೊಲೀಸ ಇಲಾಖೆ ದಕ್ಷತೆಯಿಂದ ಕಾರ್ಯ ನಿರ್ವಹಿಸುತ್ತಿದೆ, ಅಪರಾಧ ಪ್ರಮಾಣ ಕಡಿಮೆಯಾಗಿಸುವಲ್ಲಿ ನಾಗರಿಕರ ಪಾತ್ರವು ಬಹಳ ಮುಖ್ಯವಾಗಿದೆ ಎಂದು ಯಾದಗಿರಿ ಜಿಲ್ಲೆ, ಸುರಪುರ ಮತಕ್ಷೇತ್ರದ ಶಾಸಕ ರಾಜಾ ವೇಣುಗೋಪಾಲ್ ನಾಯಕ್ ಹೇಳಿದರು. ಸುರಪುರ ತಾಲೂಕು, ದೇವಪುರ ಗ್ರಾಮದಲ್ಲಿ, ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ 'ಮನೆ ಮನೆಗೆ ಪೊಲೀಸ್' ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಶಾಂತಿ ಸುವ್ಯವಸ್ಥೆಯನ್ನು ಕಾಪಾಡುವ ನಿಟ್ಟಿನಲ್ಲಿ, ಈ ಯೋಜನೆ ಜಾರಿಗೆ ತರಲಾಗಿದೆ. ಪ್ರತಿ ಮನೆಗೂ ಪೊಲೀಸರು ಭೇಟಿ ನೀಡಿ, ಜನರ ಸಮಸ್ಯೆಗಳನ್ನು ಆಲಿಸಲಿದ್ದಾರೆ ಹಾಗೂ ಕಾನೂನು ಸಂಬಂಧಿತ ಸಮಸ್ಯೆಗಳ ಬಗ್ಗೆ ಅರಿವು ಮೂಡಿಸಲಿದ್ದಾರೆ ಎಂದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>